**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ**

# ಓ ಎಸ್ ನಂ. 48/2019

ಪಿ ಡಬ್ಲ್ಯೂ: 1

ದಿನಾಂಕ 11-11-2019 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು

ಮುಖ್ಯ ವಿಚಾರಣೆಃ ವಾದಿ ಪರಃ ಶ್ರೀ ಬಿ ಎಂ ಪಿ ವಕೀಲರಿಂದಃ

ನಾನು ದಾವೆಯಲ್ಲಿ ವಾದಿಯಿಂದ ಅಧಿಕಾರ ಪತ್ರ ಪಡೆದಿದ್ದು, ನನ್ನ ಮುಖ್ಯ ವಿಚಾರಣೆಯ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ. ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಗುರುತಿಸಬೇಕಾಗಿ ಕೇಳಿಕೊಳ್ಳುತ್ತೇನೆ.

ವಾದಿ ನನಗೆ ಬರೆದುಕೊಟ್ಟಿರುವ ಅಧಿಕಾರ ಪತ್ರವನ್ನು ನಿಪಿ-1, ಆರ್ ಟಿ ಸಿ ನಿಪಿ-2, ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಪುರಸಭೆ ಮುಖ್ಯಾಧಿಕಾರಿ ಬರೆದಿರುವ ಎರಡು ಪತ್ರಗಳನ್ನು ಕ್ರಮವಾಗಿ ನಿಪಿ-3 ಮತ್ತು 4, ಭೂದಾಖಲೆಗಳ ಸಹಾಯಕ ನಿರ್ದೇಶಕರಿಗೆ ಪುರಸಭೆಯಿಂದ ಬರೆದಿರುವ ಎರಡು ಪತ್ರಗಳನ್ನು ಕ್ರಮವಾಗಿ ನಿಪಿ-5 ಮತ್ತು 6, ಪುರಸಭೆಯ ಸಾಮಾನ್ಯ ಸಭೆಯ ನಡುವಳಿಯನ್ನು ನಿಪಿ-7, ವಾದಿಯ ತಂದೆ-ತಾಯಿ ಮರಣ ದೃಡೀಕರಣ ಪತ್ರಗಳನ್ನು ಕ್ರಮವಾಗಿ ನಿಪಿ-8 ಮತ್ತು 9, ವಾದಿ ಕುಟುಂಬದ ವಂಶವೃಕ್ಷ ನಿಪಿ-10, ಪೋಲೀಸ್ ಠಾಣೆಯಿಂದ ನೀಡಿರುವ ಹಿಂಬರಹವನ್ನು ನಿಪಿ-11, ದಿನಾಂಕ 29-05-1986 ರ

ಕ್ರಯಪತ್ರದ ದೃಡೀಕೃತ ಪ್ರತಿಯನ್ನು ನಿಪಿ-12, ಓ ಎಸ್ ನಂ.528/11 ರ ತೀರ್ಪು ಮತ್ತು ಡಿಕ್ರಿಯನ್ನು ಒಟ್ಟಾಗಿ ನಿಪಿ-13 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸೀನಿಯರ್ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.

ಕಡೂರು.